## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 463 |
| ಸದಸ್ಯರ ಹೆಸರು | ಶ್ರೀ ಮಂಜುನಾಥ್ ಭಂಡಾರಿ |
| ಉತ್ತರಿಸುವ ದಿನಾಂಕ | 19.08.2026 |
| ಉತ್ತರಿಸುವವರು | ಮುಜರಾಯಿ, ಮೀನುಗಾರಿಕೆ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು |

********

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿ ನೇತೃತ್ವದ ಎಷ್ಟು ಸಮಿತಿಗಳು ಹಾಗೂ ಪ್ರಾಧಿಕಾರಗಳಿವೆ; ಅವುಗಳು ಎಷ್ಟು ಅವಧಿಗಳಿಗೊಮ್ಮೆ ಸಭೆ ಸೇರಬೇಕಾಗಿದೆ; ಪ್ರಸ್ತುತ ಒಟ್ಟು ಎಷ್ಟು ಸಭೆಗಳು ಯಾವ ಯಾವ ಜಿಲ್ಲೆಗಳಲ್ಲಿ ನಡೆದಿವೆ; | ರಾಜ್ಯದ ಧಾರ್ಮಿಕ ದತ್ತಿ ಇಲಾಖೆಗೆ ಸಂಬಂಧಿಸಿದಂತೆ, ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ, 1997ರ ಕಲಂ 21ರನ್ವಯ ರಚಿಸಲ್ಪಡುವ ಜಿಲ್ಲಾ ಧಾರ್ಮಿಕ ಪರಿಷತ್ತಿಗೆ ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಯವರು ಅಧ್ಯಕ್ಷರಾಗಿರುತ್ತಾರೆ.<br><br>ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ನಿಯಮಗಳು, 2002ರ ನಿಯಮ 21-ಎ(1)ರನ್ವಯ ಜಿಲ್ಲಾ ಧಾರ್ಮಿಕ ಪರಿಷತ್ತು ಕನಿಷ್ಠ 2 ತಿಂಗಳಿಗೊಮ್ಮೆಯಾದರೂ ಸಭೆ ಸೇರತಕ್ಕದ್ದು ಹಾಗೂ ತುರ್ತು ವಿಷಯದ ಚರ್ಚೆಗಾಗಿ ಅಧ್ಯಕ್ಷರ ನಿರ್ದೇಶನದ ಮೇರೆಗೆ ಯಾವುದೇ ಸಮಯದಲ್ಲಿ ಯಾವುದೇ ವಿಶೇಷ ಸಭೆಯನ್ನು ನಡೆಸಬಹುದು.<br><br>ಪ್ರಸ್ತುತ, ರಾಜ್ಯದ ಬೆಂಗಳೂರು ನಗರ ಜಿಲ್ಲೆ / ದಕ್ಷಿಣ ಕನ್ನಡ ಜಿಲ್ಲೆ / ಉತ್ತರ ಕನ್ನಡ ಜಿಲ್ಲೆ / ರಾಮನಗರ ಜಿಲ್ಲೆ / ಶಿವಮೊಗ್ಗ ಜಿಲ್ಲೆ / ತುಮಕೂರು ಜಿಲ್ಲೆ / ಉಡುಪಿ ಜಿಲ್ಲೆ ಈ 7 ಜಿಲ್ಲೆಗಳಿಗೆ ಜಿಲ್ಲಾ ಧಾರ್ಮಿಕ ಪರಿಷತ್ತು ರಚನೆಯಾಗಿರುತ್ತದೆ.<br><br>ಸದರಿ 7 ಜಿಲ್ಲೆಗಳಿಗೆ ಜಿಲ್ಲಾ ಧಾರ್ಮಿಕ ಪರಿಷತ್ತು ರಚನೆಯಾಗಿರುವ ಜಿಲ್ಲಾ ಮಟ್ಟದ ಸಮಿತಿಯ ಸಭೆಗಳ ವಿವರಗಳನ್ನು **ಅನುಬಂಧ-1**ರಲ್ಲಿ ಒದಗಿಸಿದೆ.<br><br>ರಾಜ್ಯದ ಧಾರ್ಮಿಕ ದತ್ತಿ ಇಲಾಖೆಗೆ ಸೇರಿದ 6 ಪ್ರಮುಖ ದೇವಾಲಯಗಳಿಗೆ ಅಭಿವೃದ್ಧಿ ಪ್ರಾಧಿಕಾರ ರಚನೆಯಾಗಿದ್ದು, ಈ ಪ್ರಾಧಿಕಾರಗಳ ಜಿಲ್ಲಾಮಟ್ಟದ ಸಮಿತಿಗೆ ಆಯಾಯ ಜಿಲ್ಲೆಗಳ ಜಿಲ್ಲಾಧಿಕಾರಿಯವರು ಅಧ್ಯಕ್ಷರಾಗಿರುತ್ತಾರೆ. ಅಭಿವೃದ್ಧಿ ಪ್ರಾಧಿಕಾರಗಳಿಗೆ ಜಾರಿಗೆ ತರಲಾಗಿರುವ |

| | | |
|---|---|---|
| | | ಅಧಿನಿಯಮದಡಿಯಲ್ಲಿ ಪ್ರತಿ ಪ್ರಾಧಿಕಾರವು ಜಿಲ್ಲಾ ಮಟ್ಟದ ಸಭೆಯನ್ನು ಕರೆಯಲು ನಿಗಧಿಪಡಿಸಿರುವ ಅವಧಿಯಲ್ಲಿ ಸಭೆಗಳನ್ನು ನಡೆಸಬೇಕಾಗಿರುತ್ತದೆ. ಈ ಅಭಿವೃದ್ಧಿ ಪ್ರಾಧಿಕಾರಗಳು ಕಳೆದ ಮೂರು ವರ್ಷಗಳಲ್ಲಿ ಒಟ್ಟು 15 ಸಭೆಗಳನ್ನು ನಡೆಸಿದ್ದು, ಸಭೆಗಳ ವಿವರಗಳನ್ನು **ಅನುಬಂಧ-2**ರಲ್ಲಿ ಒದಗಿಸಿದೆ |
| ಆ) | ರಾಜ್ಯದ ಧಾರ್ಮಿಕ ದತ್ತಿ ಇಲಾಖೆಯ ಜಿಲ್ಲಾ ಮಟ್ಟದ ಸಮಿತಿಯು ನಿಯಮಾನುಸಾರ ಪ್ರತಿ ತಿಂಗಳಿಗೆ ಕನಿಷ್ಠ ಒಂದು ಸಭೆಯನ್ನು ನಡೆಸಬೇಕಾಗಿದ್ದು, ಕಳೆದ 3 ವರ್ಷಗಳಲ್ಲಿ ಪ್ರತಿ ಜಿಲ್ಲೆಯಲ್ಲಿ ಧಾರ್ಮಿಕ ದತ್ತಿ ಇಲಾಖೆಯ ಜಿಲ್ಲಾ ಮಟ್ಟದ ಸಮಿತಿಯು ವರ್ಷವಾರು ಎಷ್ಟು ಸಭೆಗಳನ್ನು ನಡೆಸಿದೆ; ಸಮಿತಿಯ ಸಭೆಗಳು ನಡೆಯದ ಜಿಲ್ಲೆಗಳು ಯಾವುವು? ಸಭೆ ನಡೆಯದಿರುವುದಕ್ಕೆ ಕಾರಣಗಳೇನು; | ರಾಜ್ಯದ ಧಾರ್ಮಿಕ ದತ್ತಿ ಇಲಾಖೆಗೆ ಸಂಬಂಧಿಸಿದಂತೆ, ಜಿಲ್ಲಾ ಧಾರ್ಮಿಕ ಪರಿಷತ್ತು ರಚನೆಯಾಗಿರುವ ಏಳು(7) ಜಿಲ್ಲೆಗಳ ಜಿಲ್ಲಾ ಧಾರ್ಮಿಕ ಪರಿಷತ್ತುಗಳು ಕಳೆದ ಮೂರು ವರ್ಷಗಳಲ್ಲಿ ಒಟ್ಟು 40 ಸಭೆಗಳನ್ನು ನಡೆಸಿವೆ. ವರ್ಷವಾರು ಸಭೆಗಳ ಮಾಹಿತಿ **ಅನುಬಂಧ-1**ರಲ್ಲಿ ಒದಗಿಸಿದೆ.<br><br>ರಾಜ್ಯದ ಧಾರ್ಮಿಕ ದತ್ತಿ ಇಲಾಖೆಗೆ ಸಂಬಂಧಿಸಿದಂತೆ, ರಚನೆಯಾಗಿರುವ ದೇವಾಲಯಗಳ ಆರು (6) ಅಭಿವೃದ್ಧಿ ಪ್ರಾಧಿಕಾರಗಳು ಕಳೆದ ಮೂರು ವರ್ಷಗಳಲ್ಲಿ ಒಟ್ಟು 15 ಸಭೆಗಳನ್ನು ನಡೆಸಿವೆ. ಸಭೆಗಳ ಮಾಹಿತಿ **ಅನುಬಂಧ-2**ರಲ್ಲಿ ಒದಗಿಸಿದೆ.<br><br>ಅವಶ್ಯಕತೆಗೆ ಅನುಗುಣವಾಗಿ ಹಾಗೂ ನಿಯಮಿತವಾಗಿ ಜಿಲ್ಲಾ ಮಟ್ಟದ ಸಮಿತಿಯು ಸಭೆಗಳನ್ನು ನಡೆಸಲಾಗುತ್ತಿರುತ್ತದೆ. |
| ಇ) | ಈ ಸಭೆಗಳು ನಡೆಯದೆ ಹಲವಾರು ಅಗತ್ಯ ನಿರ್ಣಯಗಳು, ಅವುಗಳ ಅನುಷ್ಠಾನದಲ್ಲಿ ಬಾಕಿ ಉಳಿದಿರುವ ಬಗ್ಗೆ ಸರಕಾರ ಯಾವ ರೀತಿ ಕ್ರಮವಹಿಸಿದೆ; | ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ರಚನೆಯಾಗಿರುವ ಜಿಲ್ಲಾ ಧಾರ್ಮಿಕ ಪರಿಷತ್ತು ಮತ್ತು ದೇವಾಲಯಗಳ ಅಭಿವೃದ್ಧಿ ಪ್ರಾಧಿಕಾರಗಳ ಜಿಲ್ಲಾ ಮಟ್ಟದ ಸಮಿತಿ ಸಭೆಗಳ ನಿರ್ಣಯದಂತೆ ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತರಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಹಿಂದಿನ ಮಾನ್ಯ ಸಾರಿಗೆ ಮತ್ತು ಧಾರ್ಮಿಕ ದತ್ತಿ ಇಲಾಖೆ ಸಚಿವರು ಹಾಗೂ ಅಧ್ಯಕ್ಷರು, ರಾಜ್ಯ ಧಾರ್ಮಿಕ ಪರಿಷತ್ತು ಇವರ ಘನ ಅಧ್ಯಕ್ಷತೆಯಲ್ಲಿ ದಿನಾಂಕ:17.03.2026ರಂದು ನಡೆದ 4ನೇ ರಾಜ್ಯ ಧಾರ್ಮಿಕ ಪರಿಷತ್ತಿನ ಸಭೆಯಲ್ಲಿ ಜಿಲ್ಲಾ ಧಾರ್ಮಿಕ ಪರಿಷತ್ತು ರಚನೆಯಾಗದೇ ಇರುವ ಜಿಲ್ಲೆಗಳಲ್ಲಿ ಜಿಲ್ಲಾ ಧಾರ್ಮಿಕ ಪರಿಷತ್ತಿನ ಅಧಿಕಾರ ಪ್ರಕಾರ್ಯಗಳನ್ನು ರಾಜ್ಯ ಧಾರ್ಮಿಕ ಪರಿಷತ್ತಿನ ವತಿಯಿಂದ ನಿರ್ವಹಿಸುವ ಬಗ್ಗೆ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ಅಧಿನಿಯಮ, 2011ಕ್ಕೆ ಸೂಕ್ತ ತಿದ್ದುಪಡಿ ತರುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ತೀರ್ಮಾನಿಸಿದಂತೆ, ಸರ್ಕಾರದಲ್ಲಿ ಸ್ವೀಕೃತವಾದ ಪ್ರಸ್ತಾವನೆಯಲ್ಲಿ ಕೆಲವು ಅಂಶಗಳನ್ನು |

| | | |
|---|---|---|
| | | ಪರಿಶೀಲಿಸಿ ಸೂಕ್ತ ಪ್ರಸ್ತಾವನೆ ಸಲ್ಲಿಸುವಂತೆ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರನ್ನು ಕೋರಲಾಗಿರುತ್ತದೆ. |
| ಈ) | ಕಳೆದ 3 ವರ್ಷಗಳಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಧಾರ್ಮಿಕ ದತ್ತಿ ಇಲಾಖೆಯ ಜಿಲ್ಲಾ ಮಟ್ಟದ ಸಮಿತಿಯು ಎಷ್ಟು ಬಾರಿ ಸಭೆ ನಡೆಸಿರುತ್ತವೆ; | ಕಳೆದ 3 ವರ್ಷಗಳಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಧಾರ್ಮಿಕ ದತ್ತಿ ಇಲಾಖೆಯ ಜಿಲ್ಲಾ ಮಟ್ಟದಲ್ಲಿ ಒಟ್ಟು 08 ಸಮಿತಿ ಸಭೆಗಳನ್ನು ಹಾಗೂ ಉಡುಪಿ ಜಿಲ್ಲೆಯ ಧಾರ್ಮಿಕ ದತ್ತಿ ಇಲಾಖೆಯ ಜಿಲ್ಲಾ ಮಟ್ಟದಲ್ಲಿ ಒಟ್ಟು 10 ಸಮಿತಿ ಸಭೆಗಳನ್ನು ನಡೆಸಲಾಗಿರುತ್ತದೆ. |
| ಉ) | ಮುಂದಿನ ದಿನಗಳಲ್ಲಿ ಧಾರ್ಮಿಕ ದತ್ತಿ ಇಲಾಖೆಯ ಜಿಲ್ಲಾ ಮಟ್ಟದ ಸಮಿತಿಯು ಪ್ರತಿ ತಿಂಗಳು ಕಡ್ಡಾಯವಾಗಿ ಸಭೆ ನಡೆಸಿ ನಿರ್ಣಯಗಳನ್ನು ಅನುಷ್ಠಾನ ಮಾಡಲು ಯಾವ ರೀತಿಯ ಕ್ರಮ ವಹಿಸಲಾಗುವುದು? | ಜಿಲ್ಲಾ ಮಟ್ಟದ ಸಭೆಗಳನ್ನು ಕಾಲಕಾಲಕ್ಕೆ ನಡೆಸಿ ನಿರ್ಣಯಗಳನ್ನು ನಿಯಮಾನುಸಾರ ಅನುಷ್ಠಾನ ಮಾಡಲು ಕ್ರಮ ಕೈಗೊಳ್ಳುವಂತೆ ಸರ್ಕಾರದ ವಿವಿಧ ಸಭೆಗಳಲ್ಲಿ ಈಗಾಗಲೇ ಸೂಚಿಸಲಾಗಿರುತ್ತದೆ |

ಸಂಖ್ಯೆ: ಕಂಇ 164 ಮುಸಪ್ರ 2026

(ಕೆ.ಎಸ್.ಬಸವಂತಪ್ಪ)
ಮುಜರಾಯಿ ,ಮೀನುಗಾರಿಕೆ,ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು

## ಅನುಬಂಧ-01

| ಕ್ರ.ಸಂ. | ಜಿಲ್ಲಾ ಪರಿಷತ್ತುಗಳ ಹೆಸರು | ವರ್ಷಗಳು | ಸಭೆಗಳ ಸಂಖ್ಯೆ | ಸಭೆಗಳ ಒಟ್ಟು ಸಂಖ್ಯೆ. |
|---|---|---|---|---|
| 1. | ಬೆಂಗಳೂರು ನಗರ ಜಿಲ್ಲಾ ಧಾರ್ಮಿಕ ಪರಿಷತ್ತು | 2024-25 | 01 | 06 ಸಭೆಗಳು |
| | | 2025-26 | 04 | |
| | | 2026-27 | 01 | |
| 2. | ದಕ್ಷಿಣ ಕನ್ನಡ ಜಿಲ್ಲಾ ಧಾರ್ಮಿಕ ಪರಿಷತ್ತು | 2023-24 | 02 | 08 ಸಭೆಗಳು |
| | | 2024-25 | 05 | |
| | | 2025-26 | 01 | |
| 3. | ಉತ್ತರ ಕನ್ನಡ ಜಿಲ್ಲಾ ಧಾರ್ಮಿಕ ಪರಿಷತ್ತು | 2024-25 | 01 | 03 ಸಭೆಗಳು |
| | | 2025-26 | 02 | |
| 4. | ರಾಮನಗರ ಜಿಲ್ಲಾ ಧಾರ್ಮಿಕ ಪರಿಷತ್ತು | 2023-24 | - | 03 ಸಭೆಗಳು |
| | | 2024-25 | 01 | |
| | | 2025-26 | 02 | |
| 5. | ಶಿವಮೊಗ್ಗ ಜಿಲ್ಲಾ ಧಾರ್ಮಿಕ ಪರಿಷತ್ತು | 2024-25 | 07 | 07 ಸಭೆಗಳು |
| | | 2025-26 | | |
| 6. | ತುಮಕೂರು ಜಿಲ್ಲಾ ಧಾರ್ಮಿಕ ಪರಿಷತ್ತು | 2023-24 | - | 03 ಸಭೆಗಳು |
| | | 2024 25 | 01 | |
| | | | 01 | |
| | | 2025-26 | 01 | |
| 7. | ಉಡುಪಿ ಜಿಲ್ಲಾ ಧಾರ್ಮಿಕ ಪರಿಷತ್ತು | 2023-24 | 01 | 10 ಸಭೆಗಳು |
| | | 2024-25 | 03 | |
| | | 2025-26 | 06 | |

(ಸಹಿ)
ಆಯುಕ್ತರ ಪರವಾಗಿ,
ಧಾರ್ಮಿಕ ದತ್ತಿ ಇಲಾಖೆ, ಬೆಂಗಳೂರು.

## ಅನುಬಂಧ-2

| ಕ್ರ. ಸಂ | ಜಿಲ್ಲೆ | ಅಭಿವೃದ್ಧಿ ಪ್ರಾಧಿಕಾರದ ಹೆಸರು. | ಒಟ್ಟು ಸಭೆಗಳು |
|---|---|---|---|
| 1. | ಚಾಮರಾಜ ನಗರ | ಶ್ರೀ ಮಲೆ ಮಹದೇಶ್ವರ ಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ. | 01 |
| 2. | ಬೆಂಗಳೂರು ಗ್ರಾಮಾಂತರ. | ಶ್ರೀ ಘಾಟಿ ಸುಬ್ರಹ್ಮಣ್ಯ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ. | 01 |
| 3. | ಬೆಳಗಾವಿ. | ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ ಯಲ್ಲಮ್ಮನಗುಡ್ಡ ಅಭಿವೃದ್ಧಿ ಪ್ರಾಧಿಕಾರ. | 06 |
| 4. | ಕೊಪ್ಪಳ. | ಶ್ರೀ ಹುಲಿಗಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ. | 03 |
| 5. | ಮೈಸೂರು. | ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ. | 04 |
| 6. | ಶಿವಮೊಗ್ಗ. | ಶ್ರೀ ರೇಣುಕಾ ದೇವಿ ಚಂದ್ರುಗುತ್ತಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ. | ಸಭೆ ನಡೆದಿಲ್ಲ. |

ಆಯುಕ್ತರ ಪರವಾಗಿ,
ಧಾರ್ಮಿಕ ದತ್ತಿ ಇಲಾಖೆ, ಬೆಂಗಳೂರು.